# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ - 345 (410)
2. ಮಾನ್ಯ ಸದಸ್ಯರ ಹೆಸರು - ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ - 19/02/2024
4. ಉತ್ತರಿಸುವ ಸಚಿವರು - ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಪ್ರಶ್ನೆ | ಉತ್ತರ |
|---|---|
| ಅ) ಶಿಕ್ಷಣ ಇಲಾಖೆಯಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳಲ್ಲಿ ಹಿರಿಯ ಉಪನ್ಯಾಸಕರು ಹಾಗೂ ಉಪನ್ಯಾಸಕರುಗಳಾಗಿ ರಾಜ್ಯದಲ್ಲಿ ಎಷ್ಟು ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ | ರಾಜ್ಯದಲ್ಲಿನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳಲ್ಲಿ 218 ಹಿರಿಯ ಉಪನ್ಯಾಸಕರು ಮತ್ತು 428 ಉಪನ್ಯಾಸಕರು ಸೇರಿ ಒಟ್ಟು 646 ಅಧಿಕಾರಿಗಳು ಕರ್ತವ್ಯನಿರ್ವಹಿಸುತ್ತಿದ್ದಾರೆ. |
| ಆ) ರಾಜ್ಯದಲ್ಲಿನ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಹಿರಿಯ ಉಪನ್ಯಾಸಕರುಗಳು ಮತ್ತು ಉಪನ್ಯಾಸಕರುಗಳಿಗೆ ಸರ್ಕಾರದಿಂದ ಬಾಕಿ ಇರುವ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆ ಮತ್ತು ಇನ್ನಿತರೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) | ಬಾಕಿ ಇರುವ ಅನುದಾನದ ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ |
| ಇ) ಈ ಉಪನ್ಯಾಸಕರುಗಳಿಗೆ ಬಾಕಿ ಇರುವ ಮೊತ್ತವನ್ನು ಶಿಕ್ಷಣ ಇಲಾಖೆ ಯಾವ ದಿನಾಂಕದೊಳಗೆ ನೀಡಲು ಕ್ರಮಕೈಗೊಳ್ಳುವುದೆ? | ರಾಜ್ಯದಲ್ಲಿನ ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ (ಸಿಟಿಇ), ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಮತ್ತು ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ (ಟಿಟಿಐ) ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆ ಪಾವತಿಸುವ ಸಂಬಂಧ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅನುದಾನ ನಿರೀಕ್ಷಿಸಲಾಗಿದೆ |

ಸಂಖ್ಯೆ: ಇಪಿ 13 ಟಿಡಿಐ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು